ಮಾಗಡಿ ಪ್ರಾಥಮಿಕ ಆರೋಗ್ಯ ಕೇಂದ್ರದ ಕಟ್ಟಡ ದುರಸ್ತಿ

802 - ಶ್ರೀ ಎಚ್.ಸಿ. ಬಾಲಕೃಷ್ಣ (ಮಾಗಡಿ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಮಾಗಡಿ ಪ್ರಾಥಮಿಕ ಆರೋಗ್ಯ ಕೇಂದ್ರದ ಕಟ್ಟಡ ಶಿಥಿಲವಾಗಿದ್ದು ಸಾರ್ವಜನಿಕರಿಗೆ ತೀವ್ರ ರೀತಿಯ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?*

ಆ) *ಈ ಕಟ್ಟಡ ದುರಸ್ತಿ ಮಾಡಲೂ ಕ್ರಮ ತೆಗೆದುಕೊಳ್ಳಲಾಗಿದೆಯೇ? ಇದರ ಅಂದಾಜು ವೆಚ್ಚವೆಷ್ಟು? ದುರಸ್ತಿ ಕಾರ್ಯ ಯಾವಾಗ ಪ್ರಾರಂಭವಾಗುವುದು?*

ಇ) *ಕುದೂರು, ಸುಗ್ಗನಹಳ್ಳಿ, ತಿಪ್ಪಸಂದ್ರ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ವೈದ್ಯರಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಹಾಗಿದ್ದಲ್ಲಿ ಮೇಲ್ಕಂಡ ಸ್ಥಳಗಳಿಗೆ ವೈದ್ಯರನ್ನು ಯಾವಾಗ ನೇಮಕ ಮಾಡಲಾಗುವುದು?*

ಶ್ರೀ ಹೆಚ್.ಸಿ. ಮಹದೇವಪ್ಪ (ಆರೋಗ್ಯ ಕುಟುಂಬ ಕಲ್ಯಾಣ ಸಚಿವರು) :

ಅ) ಬಂದಿದೆ.

ಆ) ಕ್ರಮ ತೆಗೆದುಕೊಳ್ಳಲಾಗಿದೆ. ದುರಸ್ತಿ ಕಾರ್ಯಕ್ಕೆ ನಿರ್ವಾಹಕ ಇಂಜಿನಿಯರ್ ಕಾರ್ಯ ಜಿಲ್ಲಾ ಪಂಚಾಯತ್ ಇಂಜಿನಿಯರಿಂಗ್ ವಿಭಾಗ, ರಾಮನಗರ, ಇವರು ರೂ.2.20 ಲಕ್ಷಕ್ಕೆ ಅಂದಾಜು ವೆಚ್ಚ ಪಟ್ಟಿಯನ್ನು ತಯಾರಿಸಿ ಆಡಳಿತಾತ್ಮಕ ಅನುಮೋದನೆಗೆ ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯ ನಿರ್ವಾಹಕ ಅಧಿಕಾರಗಳಿಗೆ ಕಳುಹಿಸಿರತ್ತಾರೆ. ಆಡಳಿತಾತ್ಮಕ ಅನುಮೋದನೆ ದೊರೆತ ತಕ್ಷಣ ದುರಸ್ತಿ ಕಾಮಗಾರ ಪ್ರಾರಂಭವಾಗುವುದು.

ಇ) ಕುದೂರು ಮತ್ತು ತಿಪ್ಪಸಂದ್ರ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಈಗಾಗಲೇ ವೈದ್ಯಾಧಿಕಾರಿಗಳು ಕಾರ್ಯ ನಿರ್ವಹಿಸುತ್ತಿದ್ದಾರೆ. ಸುಗ್ಗನಹಳ್ಳಿ ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ವೈದ್ಯರನ್ನು ನೇಮಿಸಿರುವುದಿಲ್ಲ. ಅದಾಗ್ಯೂ ಕುದೂರು ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿಗಳನ್ನು ತಾತ್ಕಾಲಿಕವಾಗಿ ವಾರಕ್ಕೆರಡು ದಿವಸ ಭೇಟಿ ನೀಡಿ ಸಾರ್ವಜನಿಕರಿಗೆ ಆರೋಗ್ಯ ಸೌಲಭ್ಯ ದೊರಿಕಿಸಲು ಆದೇಶಿಸಲಾಗಿದೆ. ಕರ್ನಾಟಕ ಲೋಕಸೇವಾ ಆಯೋಗ 400 ವೈದ್ಯರುಗಳನ್ನು ಆಯ್ಕೆ ಮಾಡಿದ್ದು ಅವರುಗಳಿಗೆ ನೇಮಕಾತಿ ನೀಡುವಾಗ ಖಾಲಿ ಇರುವ ಈ ಹುದ್ದೆ ತುಂಬಲು ಪರಿಶೀಲಿಸಲಾಗುವುದು.

ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯಿತಿಯಲ್ಲಿ ಖಾಲಿ ಇರುವ ಹುದ್ದೆಗಳ ಭರ್ತಿ.

803 - ಶ್ರೀ ಹೆಚ್.ಸಿ. ಬಾಲಕೃಷ್ಣ (ಮಾಗಡಿ) : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯತ್‌ನ ಹಲವಾರು ಇಲಾಖೆಗಳಲ್ಲಿ ಖಾಲಿ ಇರುವ 'ಸಿ' ಮತ್ತು 'ಡಿ' ದರ್ಜೆಯ ಹುದ್ದೆಗೆ ನೇರ ನೇಮಕಾತಿ ಅಥವಾ ತಾತ್ಕಾಲಿಕ ನೇಮಕಾತಿ ಮಾಡಿಕೊಳ್ಳುವ ಅಧಿಕಾರ ಜಿಲ್ಲಾ ಪಂಚಾಯಿತಿಗಿದೆಯೇ?*

ಅ) ಸಿಬ್ಬಂದಿ ಕೊರತೆಯಿಂದಾಗಿ ಜಿಲ್ಲೆಯಲ್ಲಿ ಅಭಿವೃದ್ಧಿ ಕಾರ್ಯ ಕುಂಠಿತಗೊಂಡಿರುವುದು ನಿಜವಲ್ಲವೇ?

ಇ) ಈ ಹುದ್ದೆಗಳನ್ನು ತುಂಬಲು ಸರ್ಕಾರದವರು ಕೈಗೊಂಡ ಕ್ರಮಗಳೇನು?

ಶ್ರೀ ಎಂ.ಪಿ. ಪ್ರಕಾಶ್ (ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಸಚಿವರು) :

ಅ) ಇಲ್ಲ.

ಆ) ಇತರ ಅಭಿವೃದ್ಧಿ ಇಲಾಖೆಗಳಿಂದ ನಿಯೋಜನೆಯ ಮೇಲೆ ನಿಯೋಜಿಸಿಕೊಂಡು ಕಾರ್ಯನಿರ್ವಹಿಸುತ್ತಿರುವುದರಿಂದ ಅಭಿವೃದ್ಧಿ ಕಾರ್ಯಗಳು ಕುಂಠಿತಗೊಂಡಿರುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ವೈದ್ಯಕೀಯ ಕಾಲೇಜಿನ ವಿದ್ಯಾರ್ಥಿಗಳ ವರ್ಗಾವಣೆ

804 - ಶ್ರೀ ಹೆಚ್.ಸಿ. ಬಾಲಕೃಷ್ಣ (ಮಾಗಡಿ) : ಮಾನ್ಯ ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಒಂದು ವೈದ್ಯಕೀಯ ಕಾಲೇಜಿನಿಂದ ಮತ್ತೊಂದು ವೈದ್ಯಕೀಯ ಕಾಲೇಜಿಗೆ ವಿದ್ಯಾರ್ಥಿಯು ವರ್ಗಾವಣೆ ಪಡೆಯುವಾಗ ಅನುಸರಿಸಬೇಕಾದ ನೀತಿನಿಯಮಗಳು ಪ್ರಕ್ರಿಯೆಗಳೇನು?

ಆ) ಸರ್ಕಾರವು ಯಾವ ಅಂಶಗಳನ್ನು ಆಧರಿಸಿ ವರ್ಗಾವಣೆ ಅವಕಾಶ ನೀಡುವುದು?

ಇ) ಈ ವರ್ಗಾವಣೆ ಪ್ರಕ್ರಿಯೆ ಅತ್ಯಂತ ಹೆಚ್ಚಿನದಾಗಿದ್ದು, ಅನಾವಶ್ಯಕ ಪ್ರಕ್ರಿಯೆ ಆಗಿದ್ದು, ಇದರಿಂದ ವಿದ್ಯಾರ್ಥಿಗೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಈ) ಈ ಸಮಸ್ಯೆಗೆ ಸರ್ಕಾರದ ಪರಿಹಾರವೇನು? ಇದನ್ನು ಪರಿಹರಿಸಲು ಸರ್ಕಾರದವರು ಕೈಗೊಳ್ಳುವ ಕ್ರಮಗಳೇನು?

ಡಾ|| ಎಂ. ಶಂಕರ್‌ನಾಯಕ್ (ವೈದ್ಯಕೀಯ ಶಿಕ್ಷಣ ರಾಜ್ಯ ಸಚಿವರು) :

ಅ) ಭಾರತೀಯ ವೈದ್ಯಕೀಯ ಪರಿಷತ್‌ನ ನಿಯಮಗಳಂತೆ (ಸರ್ಕಾರಿ ಆದೇಶ ಸಂಖ್ಯೆ: ಹೆಚ್‌ಎಫ್‌ಡಬ್ಯೂ :58 ಎಂಎಸ್‌ಎಫ್ 87, ದಿನಾಂಕ:17-2-88ರಲ್ಲಿ ವಿಧಿಸಿರುವ ನಿಬಂಧನೆಗಳಂತೆ ಮೊದಲನೇ ವರ್ಷದ ಎಂಬಿಬಿಎಸ್ ಉತ್ತೀರ್ಣರಾದ ವೈದ್ಯಕೀಯ ವಿದ್ಯಾರ್ಥಿಗಳನ್ನು ಒಂದು ವೈದ್ಯಕೀಯ ಕಾಲೇಜಿನಿಂದ ಇನ್ನೊಂದು ವೈದ್ಯಕೀಯ ಕಾಲೇಜಿಗೆ ಶೇಕಡ 5ರ ಮಿತಿಯೊಳಗೆ ಒಳಪಟ್ಟು ವರ್ಗಾವಣೆ ಮಾಡಲಾಗುವುದು.

1) ಒಂದು ಸರ್ಕಾರಿ ಕಾಲೇಜಿನಿಂದ ಇನ್ನೊಂದು ಸರ್ಕಾರಿ ಕಾಲೇಜಿಗೆ